# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002**

**<u>ಪತ್ರಿಕಾ ಪ್ರಕಟಣೆ</u>** ದಿನಾಂಕ: 05.07.2019

## *<u>ಸಾರಕ್ಕಿ ಕೆರೆ ಅಭಿವೃದ್ಧಿ ಕಾಮಗಾರಿ ತಪಾಸಣೆ:</u>*

ಪೂಜ್ಯ ಮಹಾಪೌರರು, ಮಾನ್ಯ ಆಡಳಿತ ಪಕ್ಷದ ನಾಯಕರು, ಬೊಮ್ಮನಹಳ್ಳಿ ವಲಯದ ಜಂಟಿ ಆಯುಕ್ತರು, ಅರಣ್ಯ ಉಪ ಸಂರಕ್ಷಣಾಧಿಕಾರಿ(ಕೆರೆಗಳು), ಜಲಮಂಡಳಿ ಅಧಿಕಾರಿಗಳು ಹಾಗೂ ಇತರೆ ಗಣ್ಯರುಗಳು ಇಂದು ಸಾರಕ್ಕಿ ಕೆರೆ ಅಭಿವೃದ್ಧಿ ಕಾರ್ಯ ಕುರಿತಂತೆ ತಪಾಸಣೆ ನಡೆಸಿದರು.

ಜರಗನಹಳ್ಳಿ ವಾರ್ಡ್ ವ್ಯಾಪ್ತಿಗೆ ಬರಯವ ಸಾರಕ್ಕಿ ಕೆರೆ ಅಭಿವೃದ್ಧಿ ಕಾಮಗಾರಿ ಭರದಿಂದ ಸಾಗಿದ್ದು, ಡಿಸೆಂಬರ್ ವೇಳೆಗೆ ಕಾಮಗಾರಿ ಮುಗಿಸುವಂತೆ ಮಹಾಪೌರರು ಅಧಿಕಾರಿಗಳಿಗೆ ತಾಕೀತು ಮಾಡಿದರು.

2016ರಲ್ಲಿ ಬಿಡಿಎಯಿಂದ ಬಿಬಿಎಂಪಿಗೆ ಹಸ್ತಾಂತರಿಸಲಾಯಿತು. ಬಳಿಕ ಕೆರೆ ಅಭಿವೃದ್ಧಿಗೆ 2016-17ರಲ್ಲಿ ರಾಜ್ಯ ಸರ್ಕಾರದ ನಗರೋತ್ಥಾನ ಅನುದಾನದಡಿ 6 ಕೋಟಿ ರೂ., 2017-18ರಲ್ಲಿ ಜಿಒಕೆ ಅನುದಾನದಡಿ 5.75 ಕೋಟಿ ರೂ. ಅನುದಾನ ಬಿಡುಗಡೆಯಾಗಿದ್ದು, ಕಳೆದ ವರ್ಷ ಬಿಬಿಎಂಪಿಯಿಂದ ಅಭಿವೃದ್ಧಿ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. ಈಗಾಗಲೇ ಕೆರೆ ಸುತ್ತಲೂ ತಡೆಗೋಡೆ ನಿರ್ಮಿಸಿ ಅದರ ಮೇಲೆ ತಂತಿಬೇಲಿ ಅಳವಡಿಸುವ ಹಾಗೂ ಎರಡು ಮುಖ್ಯ ದ್ವಾರಗಳ ನಿರ್ಮಾಣ ಕಾರ್ಯ ಮುಗಿದಿದೆ. ಮಳೆ ನೀರು ಕೆರೆಗೆ ಸರಾಗವಾಗಿ ಸೇರಲು ಒಂಬತ್ತು ಕಡೆ ಸೀಮೆಂಟ್ ಕೊಳವೆಗಳನ್ನು ಅಳವಡಿಸಲಾಗಿದೆ. 3.2 ಕಿ.ಮೀ ಉದ್ದದ ವಾಯುವಿಹಾರ ಪಥ ನಿರ್ಮಾಣದ ಕೆಲಸ ಮತ್ತು ಎರಡು ಕಡೆ ಕೋಡಿ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದೆ ಎಂದರು ಅಧಿಕಾರಿಗಳು ಮಾಹಿತಿ ನೀಡಿದರು.

2019-20ರಲ್ಲಿ ನವ ಬೆಂಗಳೂರು ಅನುದಾನದಡಿ 5 ಕೊಟಿ ರೂ. ಬಿಡುಗಡೆಯಾಗಿದ್ದು, ಕೆರೆ ಅಂಗಳದಲ್ಲಿ ಉದ್ಯಾನ, ಒಂದು ಕಲ್ಯಾಣಿ, ಮಕ್ಕಳಿಗೆ ಆಟದ ಮೈದಾನ, ದೋಣಿ ವಿಹಾರ, ಸಾರ್ವಜನಿಕ ಶೌಚಾಲಯ ನಿರ್ಮಾಣ ಮಾಡಿ ಸಾರಕ್ಕಿ ಕೆರೆಯನ್ನು ನಗರದ ಪ್ರವಾಸಿ ತಾಣವನ್ನಾಗಿ ಮಾಡಲಾಗುವುದು ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಈ ವೇಳೆ ಮಹಾಪೌರರು ಮಾತನಾಡಿ, ಸಾರಕ್ಕಿ ಕೆರೆ ಅಭಿವೃದ್ಧಿ ಕಾಮಗಾರಿಗೆ ವೇಗ ನೀಡಿ ವರ್ಷಾಂತ್ಯದೊಳಗಾಗಿ ಮುಗಿಸುವಂತೆ ಅಧಿಕಾರಿಗಳಿಗೆ ತಾಕೀತು ಮಾಡಿದರು.

## 14.49 ಕೋಟಿಯಲ್ಲಿ ಎಸ್ ಟಿ ಪಿ ಅಳವಡಿಕೆ :

ಜರಗನಹಳ್ಳಿ ಮತ್ತು ಆರ್‌ಬಿಐ ಬಡಾವಣೆಗಳಿಂದ ಕೆರೆಗೆ ಸೇರುತ್ತಿರುವ ತ್ಯಾಜ್ಯನೀರನ್ನು ಸಂಸ್ಕರಿಸಲು ಜಲಮಂಡಳಿ ವತಿಯಿಂದ ಎಂಟು ಎಕರೆ ಪ್ರದೇಶದಲ್ಲಿ 14.49 ಕೋಟಿ ರೂ. ವ್ಯಯಿಸಿ 50 ಲಕ್ಷ ಲೀಟರ್ ಸಾಮರ್ಥ್ಯದ ಎಸ್ ಟಿ ಪಿ ನಿರ್ಮಾಣ ಮಾಡಲಾಗುತ್ತಿದೆ. ಎಸ್ ಟಿ ಪಿಯಿಂದ ಸಂಸ್ಕರಿಸುವ ನೀರನ್ನು ವಾಯುವಿಹಾರದ ಪಕ್ಕದಲ್ಲಿ ಕೊಳವೆಗಳನ್ನು ಅಳವಡಿಸಿ ಕೆರೆಗೆ ಬಿಡಲಾಗುವುದು ಎಂದು ಜಲಮಂಡಳಿ ಕಾರ್ಯ ನಿರ್ವಾಹಕ ಅಭಿಯಂತರರು ಮಹಾಪೌರರಿಗೆ ಮಾಹಿತಿ ನೀಡಿದರು.

## ಜಲಮಂಡಳಿ ಅಧಿಕಾರಿಗಳಿಗೆ ತೀವ್ರ ತರಾಟೆ :

ಸಾರಕ್ಕಿ ಕೆರೆ ಸುತ್ತುಲು ಜಲಮಂಡಳಿಯಿಂದ ಸ್ಯಾನಿಟರಿ ಪೈಪ್ ಲೈನ್ ಅಳವಡಿಸಬೇಕು. ಆದರೆ ಇರುವರೆಗೆ ಜಲಮಂಡಳಿಯಿಂದ ಯಾವುದೇ ಕಾಮಗಾರಿ ಪ್ರಾರಂಭಿಸದೇ ಇರುವುದನ್ನು ಕಂಡ ಮಹಾಪೌರರು ಸಂಬಂಧಪಟ್ಟ ಅಧಿಕಾರಿಗಳಿಗೆ ತೀವ್ರ ತರಾಟೆಗೆ ತೆಗೆದುಕೊಂಡರು.

ನೀವು ಮಾಡಬೇಕಿರುವ ಕೆಲಸವನ್ನು ಬಿಬಿಎಂಪಿ ವತಿಯಿಂದ ಮಾಡಲಾಗುತ್ತಿದೆ. ಪ್ರತಿ ಬಾರಿಯೂ ನಿಮಗೆ ನೆನಪಿಸುತ್ತಲೇ ಇರಬೇಕಾ, ತ್ಯಾಜ್ಯ ನೀರು ನೇರವಾಗಿ ಕೆರೆಯ ಒಡಲು ಸೇರುತ್ತಿದೆ. ನಾವು ಕೋಟ್ಯಾಂತರ ರೂ. ವ್ಯಯಿಸಿ ಕಾಮಗಾರಿ ನಡೆಸುತ್ತಿರುವುದು ತ್ಯಾಜ್ಯ ನೀರು ಕೆರೆಗೆ ಸೇರುವುದಕ್ಕಾ ಎಂದು ಜಲಮಂಡಳಿ ಅಧಿಕಾರಿಗಳ ಮೇಲೆ ಗರಂ ಆದರು. ಅದಕ್ಕೆ ಸಹಾಯಕ ಇಂಜಿನಿಯರ್ ಪ್ರತಿಕ್ರಿಯಿಸಿ ಈಗಾಗಲೇ ಟೆಂಡರ್ ಆಗಿದೆ. 15 ದಿನದೊಳಗಾಗಿ ಕಾಮಗಾರಿ ಪ್ರಾರಂಭಿಸಲಾಗುವುದು ಎಂದರು. ಅದಕ್ಕೆ ಮಹಾಪೌರರು 15 ದಿನದೊಳಗಾಗಿ ಪ್ರಾರಂಭವಾಗದಿದ್ದಲ್ಲಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

## ವಿದ್ಯುತ್ ಕಂಬಗಳು ತೆರವುಗೊಳಿಸಿ:

ಕೆರೆ ಭಾಗದಲ್ಲಿ 25ಕ್ಕೂ ಹೆಚ್ಚು ವಿದ್ಯುತ್ ಕಂಬಗಳಿದ್ದು, ಅದನ್ನು ಕೂಡಲೆ ತೆರವುಗೊಳಿಸುವಂತೆ ಬೆಸ್ಕಾಂಗೆ ಮಹಾಪೌರರು ಕರೆ ಮಾಡಿ ತಿಳಿಸಿದರು.

**ಈ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಕಟಿಸಲು ಕೋರಿದೆ.**

**ಸಾರ್ವಜನಿಕ ಸಂಪರ್ಕಾಧಿಕಾರಿ**







